ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಬುಧವಾರ, ದಿನಾಂಕ : 24ನೇ ಜುಲೈ, 2019

6. ರಾಯಚೂರು ಜಿಲ್ಲೆಯಲ್ಲಿರುವ ಕಂದಾಯ ಗ್ರಾಮಗಳ ಬಗ್ಗೆ

ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):-

561 (770) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ: -

(ಅ) ರಾಯಚೂರು ಜಿಲ್ಲೆಯಲ್ಲಿರುವ ಕ್ಯಾಂಪ್, ತಾಂಡಾ ಗೊಲ್ಲರ ಹಟ್ಟಿ, ಇವುಗಳನ್ನು ಕಂದಾಯ ಗ್ರಾಮಗಳಾಗಿ ಪರಿವರ್ತಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಇಲ್ಲಿವರೆಗೂ ಪರಿವರ್ತಿಸಲಾಗಿರುವ ಕಂದಾಯ ಗ್ರಾಮಗಳು ಎಷ್ಟು;

(ಆ) ರಾಯಚೂರು ಜಿಲ್ಲೆಯಲ್ಲಿರುವ ಉಪನೋಂದಣಾಧಿಕಾರಿಗಳ ಕಛೇರಿ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲ್ಲೂಕು/ಪಟ್ಟಣದಲ್ಲಿ ಉಪನೋಂದಣಾಧಿಕಾರಿಗಳ ಕಟ್ಟಡವು ಶಿಥಿಲ ವ್ಯವಸ್ಥೆ ಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ನೂತನ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ಲಿಂಗಸುಗೂರು ತಾಲ್ಲೂಕಿನ ಮುದಗಲ್ಲು ಪಟ್ಟಣದಲ್ಲಿ ನೂತನನಾಡ ಕಛೇರಿ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?